**2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ.,ರವರ ನ್ಯಾಯಾಲಯ, ಕಡೂರು.**

**<u>ಸಿ.ಸಿ.ನಂ. 123/2024</u>**

ದಿನಾಂಕಃ **25-02-2026** ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

| | | |
|---|---|---|
| ಸಾಕ್ಷಿಯ ಹೆಸರು ಃ | ಪಾಂಡುರಂಗ ಎಸ್ ಬಿ | ಚಾಸಾ-9, ಪ್ರಾಸ-5 |
| ತಂದೆಯ ಹೆಸರು ಃ | ಬೀರಯ್ಯ | |
| ವಯಸ್ಸು ಃ | 52 ವರ್ಷ | |
| ಉದ್ಯೋಗ ಃ | ಎ ಎಸ್ ಐ | |
| ವಾಸ ಃ | ಚಿಕ್ಕಮಗಳೂರು | |

<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದಃ</u>

ನಾನು 2017 ರಿಂದ ಸೆಪ್ಟಂಬರ್ 2020 ರವರೆಗೆ ನಾನು ಸಖರಾಯಪಟ್ಟಣ ಠಾಣೆಯಲ್ಲಿ ಮುಖ್ಯ ಪೇದೆಯಾಗಿ ಕರ್ತವ್ಯ ನಿರ್ವಹಿಸಿದ್ದೇನೆ.

ದಿಃ 01.05.2020 ರಂದು ಸಂಜೆ 4.45 ಗಂಟೆ ಸಮಯದಲ್ಲಿ ನಾನು ಠಾಣಾ ಪ್ರಭಾರೆಯಲ್ಲಿದ್ದಾಗ ಚಾಸಾ-1 ರವರು ನೀಡಿದ ನಿಪಿ-2 ರ ವರದಿಯನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಖ್ಯೆ 45ಃ2020 ರಂತೆ ಪ್ರಕರಣ ದಾಖಲು ಮಾಡಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಮತ್ತು ಮೇಲಾಧಿಕಾರಿಗಳಿಗೆ ರವಾನಿಸಿರುತ್ತೇನೆ. ಸಾಕ್ಷಿ ನಿಪಿ-2 ರಲ್ಲಿರುವ ತನ್ನ ನೋಡಿ ಗುರುತಿಸಿದ್ದು ಅದನ್ನು ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ನಿಪಿ-7 ಎಂದು, ಸಹಿಯನ್ನು ನಿಪಿ-7(ಎ) ಎಂದು ಗುರುತಿಸಲಾಯಿತು. ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-10 ರವರಿಗೆ ಹಸ್ತಾಂತರಿಸಿರುತ್ತೇನೆ.

<u>ಪಾಟೀಸವಾಲುಃ ಆರೋಪಿ ಪರ ಶ್ರೀ. ಸಿ ಬಿ ವಕೀಲರಿಂದಃ</u>

ಚಾಸಾ-1 ರವರು ನೀಡಿದ ಸುಳ್ಳು ವರದಿಗೆ ನಾನು ಠಾಣಾ ಅಂಕಿ ಸಂಖ್ಯೆಗಾಗಿ ಆರೋಪಿ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೂ ಮುಮಾಗೂ ಯಾವುದೇ ಸಂಬಂಧ ಇಲ್ಲಾ ಎಂದರೆ ಸರಿಯಲ್ಲ.

<u>ಮರು ವಿಚಾರಣೆ ಃ ಇಲ್ಲ</u>

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ ಕೇ ಸ ಇ

Sd/-
2 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರಃದಃನ್ಯಾಃದಂ.,ರವರು, ಕಡೂರು.